**ಅ. ದಾ. ಸಂ. 158/2022**
**ಡಿ. ಡಬ್ಲ್ಯೂ - 01**

**ದಿನಾಂಕ: 12-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ-ವಾದಿಯ ಪರ ಶ್ರೀ. ಆರ್. ಎಸ್, ವಕೀಲರಿಂದ:-**

**04.** ನಾನು ಗುಡ್ಡಿ ಗಂಗಬೋವಿಯವರನ್ನು ನೋಡಿರುವುದಿಲ್ಲ. ನಾನು ವಾದಿಯ ತಂದೆಯಾದ ಗಂಗಬೋವಿ ಉ. ಗಂಗಯ್ಯನವರನ್ನು ನೋಡಿರುತ್ತೀರಾ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಗುಡ್ಡಿ ಗಂಗಬೋವಿ ಎಂಬ ವ್ಯಕ್ತಿ ಇದ್ದರು ಎಂದು ತೋರಿಸಲು ನಾನು ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರುಪಡಿಸಿದ್ದೇನೆ. ನಿಡಿ-1ರಲ್ಲಿ ಹೊರಡಿಸಿರುವ ಆದೇಶವು ದಾವಾಸ್ವತ್ತಿಗೆ ಸಂಬಂಧಿಸಿರುವುದಿಲ್ಲ. ನಿಮ್ಮ ಮುಖ್ಯ ವಿಚಾರಣೆಯ ಪ್ರಮಾಣಪತ್ರ ಮತ್ತು ಈ ಹಿಂದೆ ನೀವು ಈ ದಾವೆಯಲ್ಲಿ ಸಲ್ಲಿಸಿರುವ ಅರ್ಜಿಯ ಜೊತೆಯಲ್ಲಿ ಸಲ್ಲಿಸಿರುವ ಪ್ರಮಾಣಪತ್ರದಲ್ಲಿಯೂ ಸಹ ನೀವು ನಿಮ್ಮ ತಂದೆಯ ಹೆಸರನ್ನು ನಮೂದಿಸಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನನ್ನ ಆಧಾರ್ ಕಾರ್ಡ್‌ನಲ್ಲಿ ನನ್ನ ತಂದೆಯ ಹೆಸರನ್ನು ದಾಸಪ್ಪ ಎಂದು ನಮೂದಿಸಲಾಗಿದೆ.

05. ಚಿಕ್ಕಗಂಗಯ್ಯನವರು ನನ್ನ ತಂದೆಯ ತಂದೆಯಾಗಿರುತ್ತಾರೆ. ಆಧಾರ್ ಕಾರ್ಡ್, ರೇಷನ್ ಕಾರ್ಡ್, ಚುನಾವಣಾ ಗುರುತಿನ ಚೀಟಿ ಮತ್ತು ಇತರೇ ಎಲ್ಲಾ ದಾಖಲೆಗಳಲ್ಲಿಯೂ ನನ್ನ ತಂದೆಯ ಹೆಸರನ್ನು ದಾಸಪ್ಪ ಎಂದು ನಮೂದಿಸಲಾಗಿದೆ. ನನ್ನ ತಂದೆಯವರು 2017 ನೇ ಇಸವಿಯಲ್ಲಿ ಮೃತ ಪಟ್ಟಿರುತ್ತಾರೆ. ನಾನು ನನ್ನ ತಂದೆಯ ಮರಣ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೇನೆ. ಆಧಾರ್ ಕಾರ್ಡ್, ರೇಷನ್ ಕಾರ್ಡ್, ಚುನಾವಣಾ ಗುರುತಿನ ಚೀಟಿ ಮತ್ತು ನಿಮ್ಮ ತಂದೆಯ ಮರಣ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ನಿಮಗೆ ತೊಂದರೆ ಇದೆಯಾ ಎಂದರೆ ಸಾಕ್ಷಿಯು ಇಲ್ಲ ಎನ್ನುತ್ತಾರೆ. ವಾದಿಯು ದಾವಾಸ್ವತ್ತಿಗೆ ಸಂಬಂಧಿಸಿದಂತೆ ರೆವಿನ್ಯೂ ದಾಖಲೆಗಳನ್ನು ಸೃಷ್ಟಿ ಮಾಡಿಕೊಂಡಿರುವ ಬಗ್ಗೆ ನಾನು ತಹಶೀಲ್ದಾರವರ

ಮುಂದೆ ಪ್ರಕರಣವನ್ನು ಸಲ್ಲಿಸಿರುತ್ತೇನೆ ಮತ್ತು ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ಈ ಮೇಲೆ ಹೇಳಿರುವ ದಾಖಲೆಗಳನ್ನು ನಿಮ್ಮ ತಂದೆಯ ಹೆಸರು ದಾಸಪ್ಪ ಎಂದು ನಮೂದಿಸಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ವಾದಿಗೆ ಸೇರಿರುವ ದಾವಾಸ್ವತ್ತನ್ನು ಕಬಳಿಸಬೇಕು ಎಂಬ ಉದ್ದೇಶದಿಂದ ನೀವು ಸುಳ್ಳು ಪ್ರತಿವಾದತ್ರ ಮತ್ತು ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಸಲ್ಲಿಸಿ ನೀವು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ .

**ಮರುವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2ನೇ ಅ. ಸಿ. ಜ. ಮತ್ತು ಜೆ.ಎಂ.ಎಫ್.ಸಿ,**
**ಮಾಗಡಿ**